**C.C.No.849/2018**
**CW-8**
**PW-7**

**<u>ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ, ನ್ಯಾಯಾಲಯ, ಕುಣಿಗಲ್</u>**

# ಸಿ.ಸಿ.ನಂ.849/2018

| | | |
|---|---|---|
| ಸಾಕ್ಷಿದಾರನ ಹೆಸರು | :- | ಮೊಹಮದ್ ಇಸ್ತಿಯಾರ್ |
| ತಂದೆಯ ಹೆಸರು | :- | ಹುಸೇನ್ ಅಲಿ |
| ವಯಸ್ಸು | :- | 34 ವರ್ಷ |
| ಉದ್ಯೋಗ | :- | ಕಾರ್ ಮೆಕಾನಿಕ್ |
| ವಾಸ | :- | ಆರ್ ಎಂ ಸಿ ಯಾರ್ಡ್, ಕುಣಿಗಲ್ ಟೌನ್. |

**<u>ಸಾಕ್ಷಿಗೆ ದಿನಾಂಕಃ 13.11.2025 ರಂದು ಪ್ರಮಾಣ ವಚನ ಬೋಧಿಸಲಾಯಿತು.</u>**

**<u>ಮುಖ್ಯ ವಿಚಾರಣೆಃ- ಮಾನ್ಯ ಸ.ಸ.ಅ ರವರಿಂದ.</u>**

ಈ ಪ್ರಕರಣದ ಬಗ್ಗೆ ನನಗೆ ಗೊತ್ತಿಲ್ಲ. ನಾನು ಯಾವುದೇ ಸ್ಥಳ ಪಂಚನಾಮೆಗೆ ಭಾಗವಹಿಸಿರುವುದಿಲ್ಲ. ಸಾಕ್ಷಿಗೆ ಸ್ಥಳ ಮಹಜರ್ ಅನ್ನು ತೋರಿಸಿದ್ದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ಗುರುತಿಸಿದ ಕಾರಣ ಅದನ್ನು ಈಗಾಗಲೇ **ನಿ.ಪಿ.3** ಎಂದು ಹಾಗೂ ಸಾಕ್ಷಿಯ ಸಹಿಯನ್ನು **ನಿಪಿ.3(ಸಿ)** ಎಂದು ಗುರುತಿಸಲಾಯಿತು. ನಿಪಿ.3 ರಲ್ಲಿ ಬರೆದಿರುವ ವಿಚಾರಗಳು ನನಗೆ ತಿಳಿದಿರುವುದಿಲ್ಲ. ನಿಪಿ.3ಕ್ಕೆ 10 ವರ್ಷಗಳ ಹಿಂದೆ ಪೊಲೀಸ್ ಠಾಣೆಯಲ್ಲಿ ಪೊಲೀಸರ ಕೋರಿಕೆಯ ಮೇರೆಗೆ ಸಹಿ ಹಾಕಿರುತ್ತೇನೆ.

**(ಈ ಹಂತದಲ್ಲಿ ಮಾನ್ಯ ಸ.ಸ.ಅ ರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ, ವಾಟೀ ಸವಾಲಿಗಾಗಿ ನ್ಯಾಯಾಲಯದ ಅನುಮತಿಯನ್ನು ಕೋರಿರುತ್ತಾರೆ. ಅನುಮತಿಸಲಾಗಿದೆ.)**

**<u>ವಾಟೀ ಸವಾಲುಃ- ಮಾನ್ಯ ಸ.ಸ.ಅ ರವರಿಂದ.</u>**

ದಿನಾಂಕ 06.05.2018 ರಂದು ರಾತ್ರಿ 8.30 ರಿಂದ 9.15 ಗಂಟೆ ಸಮಯದಲ್ಲಿ ನಿಪಿ.3 ರಂತೆ

ನನ್ನ ಮತ್ತು ಚಾಸಾ.9 ರವರ ಸಮಕ್ಷಮ ಸ್ಥಳ ಪಂಚನಾಮೆ ಜರುಗಿಸಿ, ಕೃತ್ಯಕ್ಕೆ ಸಂಬಂಧಿಸಿದ ಸಿಡಿಯನ್ನು ನಮ್ಮ ಸಮಕ್ಷಮ ವಶಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ನನಗೆ ಪ್ರಕರಣದ ಬಗ್ಗೆ ಎಲ್ಲ ವಿಚಾರಗಳು ಗೊತ್ತಿದ್ದರೂ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ವಾಟೀ ಸವಾಲು ಆರೋಪಿ ಪರ ವಕೀಲರು ಇಲ್ಲ ಎಂದು ತಿಳಿಸಿರುತ್ತಾರೆ.**

**ಮರುವಿಚಾರಣೆ: ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು.)

ಓ.ಹೇ.ಕೇ.ಸರಿ ಇದೆ.

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ.
ಕುಣಿಗಲ್.